ಆ) ಹೊಸದಾಗಿ ಯಾವುದೇ ಜಿಲ್ಲಾ ಮುಖ್ಯ ರಸ್ತೆಗಳನ್ನು ನಿರ್ಮಾಣ ಮಾಡಿರುವುದಿಲ್ಲ. ಜಿಲ್ಲೆಯಲ್ಲಿರುವ 1251 ಕಿಮೀ. ಜಿಲ್ಲಾ ಮುಖ್ಯ ರಸ್ತೆಗಳ ಪೈಕಿ ಕಳೆದ ಮೂರು ವರ್ಷಗಳಲ್ಲಿ ವಿವಿಧ ಯೋಜನೆಗಳಡಿಯಲ್ಲಿ 302 ಕಿಮೀ ರಸ್ತೆಯನ್ನು ಡಾಂಬರೀಕರಣ ಮಾಡಲಾಗಿದೆ.

ಹುಣಸೂರು ಕ್ಷೇತ್ರದಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಕಟ್ಟಡ ನಿರ್ಮಾಣ

4111 (4723) : ಶ್ರೀ ಪಾಪಣ್ಣ ವಿ. (ಹುಣಸೂರು) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹುಣಸೂರು ಕ್ಷೇತ್ರದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ಎಷ್ಟು; (ವಿವರ ನೀಡುವುದು)

ಆ) ಕಟ್ಟಡವೇ ಇಲ್ಲದ ಶಾಲೆ ಹಾಗೂ ಒಂದೊಂದೇ ಕೊಠಡಿಯಿರುವ ಶಾಲೆಗಳಿಗೆ ಆದ್ಯತೆ ಕೊಟ್ಟು ಕಟ್ಟಡ ಮಂಜೂರಾತಿ ಮಾಡಲು ಜಿಲ್ಲಾ ಪಂಚಾಯತಿ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ,. ಈ ತಾರತಮ್ಯ ಹೋಗಲಾಡಿಸಲು ಸರ್ಕಾರ ಕೈಗೊಳ್ಳುವ ಕ್ರಮವೇನು;

ಪ್ರೊ। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು): ಅ) ಹುಣಸೂರು ಕ್ಷೇತ್ರದಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ವಿವರಗಳು ಈ ಕೆಳಕಂಡಂತಿವೆ.

ಸರ್ಕಾರಿ ಪ್ರಾಥಮಿಕ ಶಾಲೆಗಳು		ಸರ್ಕಾರಿ ಪ್ರೌಢಶಾಲೆಗಳು
ಕಿರಿಯ	ಹಿರಿಯ	
168	110	16

ಆ) ಕಟ್ಟಡವಿಲ್ಲದೇ ಇರುವ ಪ್ರಾಥಮಿಕ ಶಾಲೆಗಳು–4 ಹಾಗೂ ಪ್ರೌಢಶಾಲೆಗಳು–2, ಒಂದೊಂದೇ ಕೊಠಡಿ ಇರುವ ಪ್ರಾಥಮಿಕ ಶಾಲೆಗಳು–33.

ಹುಣಸೂರು ಕ್ಷೇತ್ರದಲ್ಲಿನ ಕಟ್ಟಡರಹಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಕಳೆದ 3 ವರ್ಷಗಳಿಂದ ರಾಜ್ಯ ಯೋಜನೆಯಡಿ, ಪ್ರಧಾನಮಂತ್ರಿ ಗ್ರಾಮೋದಯ ಯೋಜನೆಯಡಿ, ಕಮ್ಯುಹಲಗೆ ಕಾರ್ಯಕ್ರಮದಡಿ, ಜಿಲ್ಲಾ ಪಂಚಾಯತ್ ಯೋಜನೆಯಡಿ, ಕೊಠಡಿಗಳನ್ನು ನಿರ್ಮಿಸಲಾಗುತ್ತಿದೆ. ಆದುದರಿಂದ ಕಟ್ಟಡ ಮಂಜೂರಾತಿ ಮಾಡಲು ಜಿಲ್ಲಾ ಪಂಚಾಯತಿ ವಿಫಲವಾಗಿರುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ "ಬಿಸಿ ಊಟ" ಕಾರ್ಯಕ್ರಮ

4113 (4708) : ಶ್ರೀ ಸಭಾಪತಿ ಯು.ಆರ್. (ಉಡುಪಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಿಸಿ ಊಟ ಕಾರ್ಯಕ್ರಮ ಜಾರಿಗೆ ಬಂದಿದ್ದು, ಒಟ್ಟು ಎಷ್ಟು ವಿದ್ಯಾರ್ಥಿಗಳು ಇತರ ಪ್ರಯೋಜನವನ್ನು ಪಡೆಯುತ್ತಿದ್ದಾರೆ; (ಜಿಲ್ಲಾವಾರು ವಿವರ ನೀಡುವುದು)

ಆ) 14.7.2003ರವರೆಗೆ ಈ ಕಾರ್ಯಕ್ರಮದಡಿಯಲ್ಲಿ ಎಷ್ಟು ವಿದ್ಯಾರ್ಥಿಗಳು ಅಸ್ವಸ್ಥರಾಗಿದ್ದಾರೆ;

ಇ) ಅಸ್ವಸ್ಥರಾಗುವುದಕ್ಕೆ ಕಾರಣಗಳೇನು;

ಈ) ಈ ರೀತಿ ಆಗದಂತೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?